3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ , ತುಮಕೂರು

**Spl.C. No. 26/2020**

ಪ್ರಾಸಾ 7

ಚಾಸಾ 7

| | |
|---|---|
| ಹೆಸರು | ಆನಂದ್ |
| ತಂದಯ ಹೆಸರು | ರಂಗಸ್ವಾಮಯ್ಯ |
| ವಯಸ್ಸು | 385 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸಸ್ಥಳ | ರಂಗನಾಥಪುರ |

ಸಾಕ್ಷಿಯನ್ನು ದಿನಾಂಕ 08.06.2026 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ</u>

1) ಈಗ ನನಗೆ ತೋರಿಸಿದ ದಾಖಲಾತಿಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ದಾಖಲಾತಿಯು ಪಂಚರಿಗೆ ನೀಡಿರುವ ನೋಟೀಸು ಆಗಿದ್ದು ಅದನ್ನು ನಿಪಿ.6 ಎಂದು, ಸಾಕ್ಷಿಯ ಸಹಿಯನ್ನು ನಿಪಿ.6(ಎ) ಎಂದು ಗುರುತಿಸಲಾಯಿತು. ಈಗ ನನಗೆ ತೋರಿಸಿದ ನಿಪಿ.2 ರಲ್ಲಿ ನನ್ನ ಸಹಿ ಇರುತ್ತದೆ. ಅದನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ಆಗ ನನ್ನೊಂದಿಗೆ ಸಿದ್ದೇಶ್ ರವರು ಇದ್ದರು.

2) 2019 ರಲ್ಲಿ ನಾನು ಸಿಂಗದಹಳ್ಳಿ ಗ್ರಾಮದ ಆಸ್ಪತ್ರೆಗೆ ನಾನು ಮತ್ತು ಚಾಸಾ.8 ರವರು ಹೋಗಿ ವಾಪಸ್ ಬರುತ್ತಿದ್ದಾಗ ಕ್ರಾಸ್ ನಲ್ಲಿ ಪೊಲೀಸರು ನಿಂತಿದ್ದರು. ಆಗ ನನ್ನನ್ನು ಕರೆದು ಸದರಿ ಸಹಿಗಳನ್ನು ಪಡೆದುಕೊಂಡು ಭಾವಚಿತ್ರಗಳನ್ನು ತೆಗೆದುಕೊಂಡಿರುತ್ತಾರೆ. ಈಗ ನನಗೆ ತೋರಿಸಿದ ಭಾವಚಿತ್ರಗಳಲ್ಲಿ ನಾನು ಕಾಣುತ್ತೇನೆ. ಅವುಗಳನ್ನು ಈಗಾಗಲೇ

ನಿಪಿ.3 ರಿಂದ 5 ಎಂದು ಗುರುತಿಸಲಾಗಿದೆ. ನಿಪಿ.3 ರಿಂದ 5 ರಲ್ಲಿ ಕಾಣುವ ಮಹಿಳೆ ಯಾರೆಂದು ನನಗೆ ಗೊತ್ತಿಲ್ಲ. ಭಾವಚಿತ್ರಗಳನ್ನು ತೆಗೆದುಕೊಂಡ ಜಾಗವು ಯಾವುದು ಎಂದು ನನಗೆ ಗೊತ್ತಿಲ್ಲ. ಯಾವ ವಿಚಾರಕ್ಕೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆಂದು ನನಗೆ ಹೇಳಿರುವುದಿಲ್ಲ.

(ಈ ಹಂತದಲ್ಲಿ ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ಮಾಡಿರುವ ಪಂಚನಾಮೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸರ್ಕಾರಿ ಅಭಿಯೋಜಕರು ಭಿನ್ನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಈ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗಂಡು ಅನುಮತಿ ನೀಡಲಾಯಿತು)

**ಪಾಟೀಸವಾಲು: ಸರ್ಕಾರಿ ಅಭಿಯೋಜಕರವರಿಂದಃ**

3) ದಿನಾಂಕ 21.10.2019 ರಂದು ಸಂಜೆ 4 ರಿಂದ 5 ಗಂಟೆ ಸಮಯದಲ್ಲಿ ಪೊಲೀಸರು ನನ್ನನ್ನು ಕರೆದಿರುತ್ತಾರೆ ಎಂದರೆ ಸರಿ. ಭಾವಚಿತ್ರದಲ್ಲಿರುವ ಮಹಿಳೆಯ ಹೆಸರು ಉಮಾದೇವಿ ಎಂದರೆ ಗೊತ್ತಿಲ್ಲ. ಚಾಸಾ.1 ರವರಿಗೆ ಸೇರಿದ ಸಿಂಗದಹಳ್ಳಿ ಗ್ರಾಮದ ಸ.ನಂ.24/1 F ರ ಜಮೀನಿಗೆ ನನ್ನನ್ನು ಮತ್ತು ಚಾಸಾ.8 ರವರನ್ನು ಬರಮಾಡಿಕೊಂಡು ಚಾಸಾ.1 ರವರು ಆರೋಪಿತರು ತನ್ನ ಮೇಲೆ ಗಲಾಟೆ ಮಾಡಿದ ಸ್ಥಳವನ್ನು ತೋರಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಪೊಲೀಸರು ವಿವರವಾಗಿ ನಿಪಿ.2 ರಂತೆ ಸ್ಥಳ ಪಂಚನಾಮೆಯನ್ನು ಮಾಡಿಕೊಂಡು ನಿಪಿ.3 ರಿಂದ 5 ರಂತೆ ಭಾವಚಿತ್ರಗಳನ್ನು ತೆಗೆದುಕೊಂಡಿರುತ್ತಾರೆ ಎಂದರೆ ಸರಿ. ಆಗ ಚಾಸಾ.1 ರವರು ಮು.ಮಾ.1 ಮತ್ತು 2 ನ್ನು ನಮ್ಮ ಸಮಕ್ಷಮ ಹಾಜರುಪಡಿಸಿದ್ದು ಅವುಗಳನ್ನು ಪೊಲೀಸರು ವಶಕ್ಕೆ ತೆಗೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಏಕೆ ನನ್ನ ಸಹಿಗಳನ್ನು

ಪಡೆದುಕೊಳ್ಳುತ್ತಿದ್ದೀರಾ ಎಂದು ನಾನು ಪೊಲೀಸರಿಗೆ ಕೇಳಿರುವುದಿಲ್ಲ. ನನಗೆ ಓದಲು ಬರುತ್ತದೆ. ಪಂಚನಾಮೆಯನ್ನು ಓದಿ ತಿಳಿದುಕೊಳ್ಳಲು ನಿಮಗೆ ತೊಂದರೆ ಇತ್ತೇ ಎಂದರೆ ಸಾಕ್ಷಿಯು ಆಗ ನನಗೆ ಹುಷಾರಿರಲಿಲ್ಲ ಎಂದು ನುಡಿಯುತ್ತಾರೆ. ಚಾಸಾ.8 ರವರ ಮೂಲಕ ನಾನು ಪಂಚನಾಮೆಯನ್ನು ಓದಿಸಿ ತಿಳಿದುಕೊಂಡಿರುವುದಿಲ್ಲ. ಎಲ್ಲಾ ವಿಚಾರಗಳು ನನಗೆ ತಿಳಿದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿಗಳ ಪರ ಶ್ರೀ.N.B. ವಕೀಲರಿಂದ :**

4) ಪೊಲೀಸರು ಏನು ಬರವಣಿಗೆ ಮಾಡಿಕೊಂಡಿರುತ್ತಾರೆಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೊಲೀಸರು ಯಾವುದೇ ವಿಚಾರಗಳನ್ನು ನನಗೆ ಓದಿ ಹೇಳಿರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಎ ಒ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ತುಮಕೂರು.

ಸಾಕ್ಷಿಯ ಸಹಿ